**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 03 ಬಿಆರ್‌ಆರ್ 2018

ಕರ್ನಾಟಕ ಸರ್ಕಾರ ಸಚಿವಾಲಯ,
ಬಹು ಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 02/04/2018.

**ಇವರಿಂದ:**
ಆಯುಕ್ತರು, ರಾಜ್ಯ ಪುನರ್ವಸತಿ ಮತ್ತು ಪುನರ್‌ನಿರ್ಮಾಣ
ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ,
ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ,
**ಬೆಂಗಳೂರು-560001.**

**ಇವರಿಗೆ:**
ಜಿಲ್ಲಾಧಿಕಾರಿ,
ದಾವಣಗೆರೆ ಜಿಲ್ಲೆ,
**ದಾವಣಗೆರೆ.**

ಮಾನ್ಯರೆ,

**ವಿಷಯ:-** ತುಮಕೂರು-ಚಿತ್ರದುರ್ಗ-ದಾವಣಗೆರೆ ರೈಲ್ವೆ ಯೋಜನೆಗಾಗಿ ದಾವಣಗೆರೆ ಜಿಲ್ಲೆ, ತಾಲ್ಲೂಕಿನಲ್ಲಿ ಅವಶ್ಯವಿರುವ ಜಮೀನನ್ನು ಭೂಸ್ವಾಧೀನಪಡಿಸಿ ಕೊಳ್ಳುವುದಕ್ಕೆ ಸಂಬಂಧಿಸಿದಂತೆ ತಯಾರಿಸಿರುವ ಸಾಮಾಜಿಕ ನಿರ್ಧರಣಾ ಪರಿಣಾಮ ಅಧ್ಯಯನ ವರದಿ(S.I.A)ಯನ್ನು ಅಂಗೀಕರಿಸುವ ಕುರಿತು.

**ಉಲ್ಲೇಖ:-** ತಮ್ಮ ಕಛೇರಿಯ ಪತ್ರ ಸಂಖ್ಯೆ:SLAO/TD/RLY/CR/23/2013-14 ದಿನಾಂಕ: 07.03.2018.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದೊಂದಿಗೆ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ತುಮಕೂರು-ಚಿತ್ರದುರ್ಗ-ದಾವಣಗೆರೆ ರೈಲ್ವೆ ಯೋಜನೆಯು ಸಾರ್ವಜನಿಕ ಹಿತ್ತಾಸಕ್ತಿಯನ್ನು ಒಳಗೊಂಡಿರುವುದರಿಂದ ದಾವಣಗೆರೆ ಜಿಲ್ಲೆಯ ದಾವಣಗೆರೆ ತಾಲ್ಲೂಕಿನ **ಆನೆಗೋಡು** ಹಾಗೂ **ಕಸಬಾ** ಹೋಬಳಿಯ **14** ಗ್ರಾಮಗಳಲ್ಲಿ ಅವಶ್ಯವಿರುವ **ಒಟ್ಟಾರೆ 238.37.17** ಎಕರೆ ವಿಸ್ತೀರ್ಣದ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಸರ್ಕಾರದ ಅಧಿಸೂಚಿತ ಸಂಸ್ಥೆಯಾದ ಶ್ರೀ.ಜಿ.ವಿ. ಎಜುಕೇಶನಲ್ ಅಂಡ್ ರೂರಲ್ ಡೆವಲಪ್‌ಮೆಂಟ್ ಸೊಸೈಟಿ, ತುಮಕೂರು.ಇವರಿಂದ ತಯಾರಿಸಿರುವ ಸಾಮಾಜಿಕ ಪರಿಣಾಮ ನಿರ್ಧರಣಾ ಅಧ್ಯಯನ ವರದಿಯನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ಅಂಗೀಕರಿಸಿದ್ದು, ಮುಂದಿನ ಅಗತ್ಯ ಕ್ರಮವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:-**

1. ಸಾಮಾಜಿಕ ಪರಿಣಾಮ ನಿರ್ಧರಣಾ ಅಧ್ಯಯನ ಹಾಗೂ ಸಾಮಾಜಿಕ ಪರಿಣಾಮ ನಿರ್ವಹಣಾ ಯೋಜನಾ ವರದಿಯಲ್ಲಿನ ಅಂಶಗಳನ್ನು "ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ 2013" ಹಾಗೂ "ರಾಜ್ಯ ಭೂಸ್ವಾಧೀನ ನಿಯಮಗಳು 2015"ರನ್ವಯ ಪರಿಶೀಲಿಸಿ ಅಗತ್ಯ ಕ್ರಮವಹಿಸತಕ್ಕದ್ದು.
2. ಭೂಸ್ವಾಧೀನ ಪರಿಹಾರ, ಪುನರ್ವಸತಿ ಮತ್ತು ಪುನರ್‌ನಿರ್ಮಾಣದ ಅಂದಾಜು ವೆಚ್ಚಕ್ಕೆ ಸಂಬಂಧಿಸಿದಂತೆ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಿರುವ ಬಗ್ಗೆ ಭೂಕೋರಿಕಾ ಸಂಸ್ಥೆಯಿಂದ ಖಾತರಿಪಡಿಸಿಕೊಳ್ಳತಕ್ಕದ್ದು.
3. ಈ ಯೋಜನೆಯಲ್ಲಿ ಒಂದುವೇಳೆ ಸರ್ಕಾರಿ ಭೂಮಿ ಭೂಸ್ವಾಧೀನಗೊಳ್ಳುತ್ತಿದ್ದರೆ, ನಿಯಮಾನುಸಾರ ಭೂಕೋರಿಕಾ ಸಂಸ್ಥೆಗೆ ಹಸ್ತಾಂತರಿಸುವುದು.

--2